## <u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.</u>

**ಸಿ.ಸಿ. ಸಂಃ 613/2019**

| | | |
|---|---|---|
| ಸಾಕ್ಷಿಯ ಹೆಸರುಃ | ವಿದ್ಯಾಶಂಕರ್ | ಫ್ರಾಸಾಃಃ 13 |
| ತಂದೆ ಹೆಸರುಃ | ಶಿವನಂಜಪ್ಪ | ಚಾಸಾಃಃ 13 |
| ವಯಸ್ಸುಃ | 55 ವರ್ಷ | ಪ್ರಮಾಣೀಕರಿಸಿದ<br>ದಿಃ 12/08/2025 |
| ಉದ್ಯೋಗಃ | ವ್ಯವಸಾಯ | |
| ವಾಸ ಸ್ಥಳಃ | ಸುರಗಳ್ಳಿ, ಗ್ರಾಮ,<br>ಪಿರಿಯಾಪಟ್ಟಣ ತಾ. | |

**<u>ಮುಖ್ಯ ವಿಚಾರಣೆಃ ಮಾನ್ಯ ಸಸಅ ರಿಂದಃ</u>**

ನನಗೆ ಚಾಸಾ-14 ಗೊತ್ತು. ನನಗೆ ಈ ಪ್ರಕರಣದ ಬಗ್ಗೆ ಏನೂ ಗೊತ್ತಿಲ್ಲ. ಪೊಲೀಸರು ಯಾವುದೇ ಸ್ಥಳಕ್ಕೆ ಕರೆಸಿರಲಿಲ್ಲ ನನ್ನ ಸಮಕ್ಷಮ ಮಹಜರ್ ಕ್ರಮ ಜರುಗಿಸಿ ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ಸುಮಾರು 7 ವರ್ಷಗಳ ಹಿಂದೆ ಪೊಲೀಸ್ ಠಾಣೆಗೆ ಹೋದಾಗ ಪೊಲೀಸರು ನನ್ನ ಸಹಿ ಪಡೆದಿದ್ದರು. ಸಾಕ್ಷಿಯು ನಿಪಿ.15-ಸ್ಥಳ ಮಹಜರಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.15(ಬಿ)** ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ.5-ಅಮಾನತು ಮಹಜರ್ ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.5(ಸಿ)** ಎಂದು ಗುರುತಿಸಲಾಯಿತು. ನಿಪಿ.5 ಮತ್ತು 15 ರಲ್ಲಿರುವ ವಿಚಾರ ನನಗೆ ಗೊತ್ತಿಲ್ಲ.

**(ಈ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರುತ್ತಾರೆ. ಕಡತವನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಸಸಅ ರವರಿಂದಃ**

ದಿಃ19/06/2016 ರಂದು ಬೆಳಿಗ್ಗೆ 9.30 ರಿಂದ 10.30 ಗಂಟೆಯ ವರೆಗೆ ಪೊಲೀಸರುಎ ಸ್ಥಳ ಕ್ಕೆ ಬಂದು ನಿಪಿ. 15 ರಂತೆ ಸ್ಥಳ ಪಂಚನಾಮೆಯನ್ನು ಜರುಗಿಸಿ, ನನ್ನ ಸಹಿ ಪಡೆದರು ಎಂದರೆ ಸರಿಯಲ್ಲ.

ನಂತರ ಪೊಲೀಸರು ದಿ:18/06/2016 ರಂದು ಪೊಲೀಸ್ ಠಾಣೆಯಲ್ಲಿ ನಿಪಿ.5 ರಂತೆ ಸಂಜೆ 7.00 ರಿಂದ 7.30 ರವರೆಗೆ ಪಂಚನಾಮೆ ಮಾಡಿ, ಅಕ್ಕಿ, ಗೋದಿ ಮತ್ತು ಬೊಲೇರೋ ಗೂಡ್ಸ್ ವಾಹನವನ್ನು ಅಮಾನತ್ತು ಪಡಿಸಿಕೊಂಡು, ಸ್ಥಳದಲ್ಲಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಈ ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿತರ ಪರ ವಕೀಲರಿಂದಃ** ಇಲ್ಲ.

**ಮರು ವಿಚಾರಣೆಃ** ಇಲ್ಲ.

**ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು**

**ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.**

**ಹೆಚ್.ಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.,**

**ಪಿರಿಯಾಪಟ್ಟಣ.**